# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯದಲ್ಲಿ ಅಲ್ಪಸಂಖ್ಯಾತರು ನಡೆಸುತ್ತಿರುವ ಶೈಕ್ಷಣಿಕ ಸಂಸ್ಥೆಗಳನ್ನು ಅಲ್ಪಸಂಖ್ಯಾತರ ಸಂಸ್ಥೆಗಳನ್ನಾಗಿ ಘೋಷಿಸಲು ಇರುವ ನಿಯಮ/ ಆದೇಶಗಳನ್ನು ಪರಿಷ್ಕರಿಸುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ:ಇಡಿ 27 ಮಾಹಿತಿ 2012 (ಭಾಗ-1), ದಿನಾಂಕ:18.06.2014.
2. ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 156 ಯುಪಿಸಿ 2013, ದಿನಾಂಕ:30.07.2014.
3. ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 131 ಟಿಪಿಇ 2014 ದಿನಾಂಕ: 20.08.2014.
4. ಸರ್ಕಾರದ ಅಧಿಸೂಚನೆ ಸಂಖ್ಯೆ:ಎಸ್‌ಡಿಇಎಲ್ 79 ಐಟಿಐ 2021, ದಿನಾಂಕ: 18.05.2023.
5. ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿಯವರ ಟಿಪ್ಪಣಿ ಸಂಖ್ಯೆ:ಮುರಾಕಾ/691/2023 ದಿನಾಂಕ: 28.12.2023.

******

**ಪ್ರಸ್ತಾವನೆ:-**

ಮೇಲೆ ಓದಲಾದ (1) ರಿಂದ (4) ರವರೆಗಿನ ಆದೇಶಗಳನ್ವಯ ರಾಜ್ಯದಲ್ಲಿ ಅಲ್ಪಸಂಖ್ಯಾತರು ನಡೆಸುತ್ತಿರುವ ಶೈಕ್ಷಣಿಕ ಸಂಸ್ಥೆಗಳನ್ನು ಅಲ್ಪಸಂಖ್ಯಾತ ಶೈಕ್ಷಣಿಕ ಸಂಸ್ಥೆಗಳನ್ನಾಗಿ ಘೋಷಿಸಲು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಉನ್ನತ ಶಿಕ್ಷಣ ಇಲಾಖೆ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಗಳು ನಿಯಮ/ಸರ್ಕಾರಿ ಆದೇಶದ ಮೂಲಕ ಈ ಕೆಳಕಂಡಂತೆ ಷರತ್ತುಗಳನ್ನು ವಿಧಿಸಿ ಅನುಷ್ಠಾನಗೊಳಿಸುತ್ತಿವೆ.

| ಇಲಾಖೆಗಳು | ಮಾನದಂಡಗಳು |
|---|---|
| 1. **ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ.**<br><br>ಸರ್ಕಾರದ ಆದೇಶ ಸಂಖ್ಯೆ: ಇಡಿ 27 ಮಾಹಿತಿ 2012 (ಭಾಗ-1), ದಿ:18.06.2014. | 1. ಶಾಲೆ ಆಡಳಿತ ಮಂಡಳಿಯ ಸದಸ್ಯರು ಕಾರ್ಯಕಾರಿ ಸಮಿತಿಯಲ್ಲಿದ್ದು, ಆಯಾಯ ಭಾಷಾ/ಮತೀಯಾ ಅಲ್ಪಸಂಖ್ಯಾತ ಸದಸ್ಯರ ಸಂಖ್ಯೆ ಕನಿಷ್ಠ ಮೂರನೇ ಎರಡರಷ್ಟು ಇರಬೇಕು.<br><br>2. ಅಲ್ಪಸಂಖ್ಯಾತ ಸಂಸ್ಥೆ ಶಾಲೆಗಳೆಂದು ಘೋಷಿಸಲು ಆ ಶಾಲೆಗಳು ಆಯಾ ಶೈಕ್ಷಣಿಕ ವರ್ಷದಲ್ಲಿ ಕಡ್ಡಾಯವಾಗಿ ಕನಿಷ್ಠ ಶೇ.25 ರಷ್ಟು ಆಯಾ ಭಾಷಾ/ಆಯಾ ಮತೀಯ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳನ್ನು ಹೊಂದಿರಬೇಕು. |
| 2. **ಉನ್ನತ ಶಿಕ್ಷಣ ಇಲಾಖೆ.**<br><br>ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಗಳಿಗೆ ಮಾನ್ಯತೆ ನೀಡಲು ನಿಬಂಧನೆ ಮತ್ತು ಷರತ್ತುಗಳು) (ಕಾಲೇಜು ಶಿಕ್ಷಣ) ನಿಯಮಗಳು 2014. ದಿ:30.07.2014) | 1. At least two-third of the trustees and members of the managing committee of the society, of the collegiate education institute shall belong to the minority community [Rule-4(5)]<br>2. Out of the total intake not less than fifty percent enrolled in the said collegiate education institution shall |

...2.

Scanned with OKEN Scanner

| | |
|---|---|
| (ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 156 ಯುಪಿಸಿ 2013, | belong to the said minority community belonging to the state of Karnataka. [Rule-4(6)]. |
| 3. **ತಾಂತ್ರಿಕ ಶಿಕ್ಷಣ ಇಲಾಖೆ.**<br>ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಗಳಿಗೆ ಮಾನ್ಯತೆ ನೀಡಲು ನಿಬಂಧನೆ ಮತ್ತು ಷರತ್ತುಗಳು) (ತಾಂತ್ರಿಕ ಶಿಕ್ಷಣ) ನಿಯಮಗಳು 2014.<br>(ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 131 ಟಿಪಿಇ 2014 ದಿನಾಂಕ: 20.08.2014) | 1. At least two-third of the trustees or members of the managing committee of the society, of the technical educational institution shall belong to the minority. [Rule-4(5)]<br>2. Not less than Fifty percent of the children enrolled in the said institution shall belong to said Minority Community to which applicant the institution belongs to, out of which at least Seventy Five percent of student shall be from Karnataka. [Rule-4(6)] |
| 4. **ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ.**<br>ಕರ್ನಾಟಕ ಕೈಗಾರಿಕ ತರಬೇತಿ ಸಂಸ್ಥೆ (ಅಲ್ಪಸಂಖ್ಯಾತರ ಶಿಕ್ಷಣ ಸಂಸ್ಥೆಗಳಿಗೆ ಮಾನ್ಯತೆ ನೀಡಲು ನಿಬಂಧನೆ ಮತ್ತು ಷರತ್ತುಗಳು) (ತಾಂತ್ರಿಕ ಶಿಕ್ಷಣ) ನಿಯಮಗಳು 2023.<br>(ಸರ್ಕಾರದ ಅಧಿಸೂಚನೆ ಸಂಖ್ಯೆ: ಎಸ್‌ಡಿಇಎಲ್ 79 ಐಟಿಐ 2021, ದಿನಾಂಕ: 18.05.2023.) | 1. At least two-third of the trustees or members of the managing committee of the society, of the Industrial Training Institution shall belong to the Minority. [Rule-4(5)]<br>2. Not less than Fifty percent of the children enrolled in the said institution shall belong to said Minority Community to which applicant the institution belongs to, out of which at least Seventy Five percent of student shall be from Karnataka. [Rule-4(6)] |

2011ರ ಜನಗಣತಿಯ ಪ್ರಕಾರ ಕರ್ನಾಟಕ ರಾಜ್ಯದಲ್ಲಿ ಅಲ್ಪಸಂಖ್ಯಾತರ ಸಮುದಾಯದವರ ಒಟ್ಟು ಜನಸಂಖ್ಯೆ 96.01ಲಕ್ಷಗಳು(ಶೇ.16.28) ಆಗಿರುತ್ತದೆ. ಇದರಲ್ಲಿ ಮುಸ್ಲಿಂ ಜನಸಂಖ್ಯೆ 78.94 ಲಕ್ಷಗಳು (ಶೇ.82.25), ಕ್ರಿಶ್ಚಿಯನ್ ಜನಸಂಖ್ಯೆ 11.43 ಲಕ್ಷಗಳು(ಶೇ.11.92), ಸಿಖ್ ಜನಸಂಖ್ಯೆ 0.28 ಲಕ್ಷಗಳು (ಶೇ.0.24), ಬೌದ್ಧ ಜನಸಂಖ್ಯೆ 0.95 ಲಕ್ಷಗಳು (ಶೇ.0.98), ಜೈನ್ ಜನಸಂಖ್ಯೆ 4.40 ಲಕ್ಷಗಳು(ಶೇ.4.60) ಮತ್ತು ಪಾರ್ಸಿ ಜನಸಂಖ್ಯೆ 0.011 ಲಕ್ಷ (ಶೇ.0.01) ಅಲ್ಪಸಂಖ್ಯಾತರಲ್ಲಿನ ಶೇಕಡವಾರು ಪ್ರಮಾಣವಾಗಿರುತ್ತದೆ. ರಾಜ್ಯದಲ್ಲಿನ ಒಟ್ಟು ಅಲ್ಪಸಂಖ್ಯಾತರ ಜನಸಂಖ್ಯೆಯಲ್ಲಿ ಮುಸ್ಲಿಂ, ಕ್ರಿಶ್ಚಿಯನ್, ಸಿಖ್, ಜೈನ್, ಬೌದ್ಧ ಮತ್ತು ಪಾರ್ಸಿ ಸಮುದಾಯಗಳ ಜನಸಂಖ್ಯೆಯ ಪ್ರಮಾಣವು ತುಂಬಾ ಕಡಿಮೆ ಇರುವುದರಿಂದ ಅಲ್ಪಸಂಖ್ಯಾತರ ಸಮುದಾಯದವರು ನಡೆಸುವ ಶೈಕ್ಷಣಿಕ ಸಂಸ್ಥೆಗಳನ್ನು ಅಲ್ಪಸಂಖ್ಯಾತರ ಶೈಕ್ಷಣಿಕ ಸಂಸ್ಥೆಗಳೆಂದು ಘೋಷಿಸಲು ಹಾಲಿ ಜಾರಿಯಲ್ಲಿರುವ ನಿಯಮ/ಆದೇಶಗಳಲ್ಲಿ ನಿಗದಿಪಡಿಸಿರುವಷ್ಟು ಶೇಕಡವಾರು ವಿದ್ಯಾರ್ಥಿಗಳು ಲಭ್ಯವಾಗುವುದು ಕಷ್ಟಕರವಾಗಿರುತ್ತದೆ.

...3.

Scanned with OKEN Scanner

ಅಲ್ಪಸಂಖ್ಯಾತರ ಸಮುದಾಯದವರು ನಡೆಸುವ ಶೈಕ್ಷಣಿಕ ಸಂಸ್ಥೆಗಳಿಗೆ ಅಲ್ಪಸಂಖ್ಯಾತರ ಸ್ಥಾನಮಾನ ನೀಡುವ ವಿಷಯಕ್ಕೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರದ National Commission for Minority Educational Institutions of Higher Education, MHRD ಇವರು ಹೊರಡಿಸಿರುವ ಮಾರ್ಗ ಸೂಚಿಗಳಲ್ಲಿ ಅಲ್ಪಸಂಖ್ಯಾತ ಸ್ಥಾನಮಾನ ಪ್ರಮಾಣ ಪತ್ರ ನೀಡಲು ಕೆಳಕಂಡ ಅರ್ಹತೆಗಳನ್ನು ನಿಗಧಿಪಡಿಸಲಾಗಿರುತ್ತದೆ.

1. The educational institution is established by a member/ members of the religious minority community.
2. The educational institution is established primarily for the benefit of the minority community.
3. The educational institution is being administered by the minority community.
4. If the Minority Educational Institution concerned is being run by a trust or a registered society, the majority of the trustees of the trust or members of the society, as the case may be, must be from the minority community and the trust deed/ Articles of Association must reflect the objective of sub-serving the interest of the minority community.

ರಾಜ್ಯದಲ್ಲಿ ಅಲ್ಪಸಂಖ್ಯಾತರು ನಡೆಸುತ್ತಿರುವ ಶೈಕ್ಷಣಿಕ ಸಂಸ್ಥೆಗಳನ್ನು ಅಲ್ಪಸಂಖ್ಯಾತರ ಸಂಸ್ಥೆಗಳನ್ನಾಗಿ ಘೋಷಿಸಲು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಉನ್ನತ ಶಿಕ್ಷಣ ಇಲಾಖೆ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಗಳಲ್ಲಿ ವಿಭಿನ್ನ ರೀತಿಯಾಗಿ ಷರತ್ತುಗಳನ್ನು ವಿಧಿಸಿರುವುದರಿಂದ ಬಹಳಷ್ಟು ತೊಂದರೆ ಸೃಷ್ಟಿಯಾಗಿರುತ್ತದೆ. ಸದರಿ ನಿಯಮ ಆದೇಶಗಳಲ್ಲಿ ನಮೂದಿಸಿರುವಷ್ಟು ಪ್ರಮಾಣದ ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳು ವಿದ್ಯಾರ್ಥಿಗಳು ಲಭ್ಯವಾಗಲು ಕಷ್ಟಕರವಾಗುವುದರಿಂದ ಅಲ್ಪಸಂಖ್ಯಾತ ಸಂಸ್ಥೆಗಳನ್ನು ಘೋಷಿಸಲು ಇರುವ ನಿಯಮ/ ಆದೇಶಗಳಲ್ಲಿ 2ನೇ ಷರತ್ತನ್ನು ಸಡಿಲಿಸುವ ಬಗ್ಗೆ ಪರಿಶೀಲಿಸಿ, ಅಲ್ಪಸಂಖ್ಯಾತ ಸಂಸ್ಥೆಗಳಿಗೆ ಅನುಕೂಲವಾಗುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಏಕರೂಪತೆಯ ಸರ್ಕಾರದ ಅದೇಶ ಹೊರಡಿಸುವ ಬಗ್ಗೆ ಪರಿಶೀಲಿಸುವಂತೆ ಮೇಲೆ ಓದಲಾದ (5)ರ ಪತ್ರದಲ್ಲಿ ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿಯವರು ಕೋರಿರುತ್ತಾರೆ.

ಮೇಲಿನ ಅಂಶಗಳ ಹಿನ್ನಲೆಯಲ್ಲಿ ಅಲ್ಪಸಂಖ್ಯಾತ ಸಮುದಾಯದ ಮುಸ್ಲಿಂ, ಕ್ರಿಶ್ಚಿಯನ್, ಸಿಖ್, ಜೈನ್, ಬೌದ್ಧ ಮತ್ತು ಪಾರ್ಸಿ ಸಮುದಾಯದವರು ನಡೆಸುವ ಶೈಕ್ಷಣಿಕ ಸಂಸ್ಥೆಗಳನ್ನು ಅಲ್ಪಸಂಖ್ಯಾತರ ಸಂಸ್ಥೆಗಳನ್ನಾಗಿ ಘೋಷಿಸಲು ಮೇಲ್ಕಂಡ ಸರ್ಕಾರಿ ಆದೇಶ ಹಾಗೂ ನಿಯಮಗಳಲ್ಲಿನ ಎರಡನೇ ಷರತ್ತನ್ನು ರದ್ದುಪಡಿಸಲು, ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಯಿಂದ ಸರ್ಕಾರದ ಆದೇಶ ಹೊರಡಿಸಲು ಪ್ರಸ್ತಾಪಿಸಲಾಗಿದ್ದು., ಸದರಿ ಪ್ರಸ್ತಾವನೆಯನ್ನು ಸಚಿವ ಸಂಪುಟದ ಅನುಮೋದನೆಗಾಗಿ ಸಲ್ಲಿಸಲಾಗಿರುತ್ತದೆ. ದಿ:12.03.2024ರಂದು ನಡೆದ ಸಚಿವ ಸಂಪುಟದ ಪ್ರಕರಣ ಸಂಖ್ಯೆ:ಸಿ.251/2024ರಲ್ಲಿ ಸದರಿ ಪ್ರಸ್ತಾವನೆಯನ್ನು ಸಚಿವ ಸಂಪುಟವು ಅನುಮೋದಿಸಿರುತ್ತದೆ.



Scanned with OKEN Scanner

ಆದ್ದರಿಂದ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: MWD-LMR/2/2024,(Part-5) ಬೆಂಗಳೂರು,**
**ದಿನಾಂಕ: 16-3-2024.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಮತೀಯ ಅಲ್ಪಸಂಖ್ಯಾತ ಸಮುದಾಯ(Religious Minority)ದವರು ನಡೆಸುತ್ತಿರುವ ಶೈಕ್ಷಣಿಕ ಸಂಸ್ಥೆಗಳನ್ನು ಮತೀಯ ಅಲ್ಪಸಂಖ್ಯಾತರ ಶೈಕ್ಷಣಿಕ ಸಂಸ್ಥೆಯೆಂದು ಘೋಷಿಸಲು ಇರುವ ನಿಯಮ/ಆದೇಶಗಳಲ್ಲಿ ಅಲ್ಪಸಂಖ್ಯಾತರ ಶೈಕ್ಷಣಿಕ ಸಂಸ್ಥೆಗಳ ರಾಷ್ಟ್ರೀಯ ಆಯೋಗದ ಮಾರ್ಗಸೂಚಿಗಳಿಗೊಳಪಟ್ಟು ಆ ಶೈಕ್ಷಣಿಕ ಸಂಸ್ಥೆಗಳು ಆಯಾ ಶೈಕ್ಷಣಿಕ ವರ್ಷದಲ್ಲಿ ಕಡ್ಡಾಯವಾಗಿ ಕನಿಷ್ಠ ಶೇಕಡ ಇಂತಿಷ್ಟು ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳನ್ನು ಹೊಂದಿರತಕ್ಕದ್ದು ಎಂಬ ಷರತ್ತನ್ನು ರದ್ದುಪಡಿಸಿ ಆದೇಶಿಸಿದೆ.

ಈ ಬಗ್ಗೆ ಸಂಬಂಧಪಟ್ಟ ನಿಯಮ/ಆದೇಶಗಳಿಗೆ ಸೂಕ್ತ ತಿದ್ದುಪಡಿ ಮಾಡಲು ಆಯಾ ಆಡಳಿತ ಇಲಾಖೆಗಳು ಅಗತ್ಯ ಕ್ರಮ ಕೈಗೊಳ್ಳತಕ್ಕದ್ದು.

ಈ ಆದೇಶವನ್ನು ದಿ:12.05.2024ರಂದು ನಡೆದ ಸಚಿವ ಸಂಪುಟದ ಪ್ರಕರಣ ಸಂಖ್ಯೆ:ಸಿ.251/2024ರಲ್ಲಿ ನೀಡಿರುವ ಅನುಮೋದನೆಯಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

16/3/2024.
(ನಾಗರಾಜ)
ಸರ್ಕಾರದ ಅಧೀನ ಕಾರ್ಯದರ್ಶಿ,
ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು- ರಾಜ್ಯ ಪತ್ರದ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಕೋರಿದೆ.

**ಪ್ರತಿ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ:**

1. ಪ್ರಧಾನ ಮಹಾಲೇಖಪಾಲರು (ಅ ಮತ್ತು ಇ) (ಲೆಕ್ಕ ಪರಿಶೋಧನೆ-1 & 2) ಕರ್ನಾಟಕ, ಬೆಂಗಳೂರು.
2. ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳು.
3. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
4. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ಬೆಂಗಳೂರು.
5. ಕಾರ್ಯದರ್ಶಿ, ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ, ಬೆಂಗಳೂರು.
6. ಸರ್ಕಾರದ ಜಂಟಿ ಕಾರ್ಯದರ್ಶಿ (ಸಚಿವ ಸಂಪುಟ), ವಿಧಾನಸೌಧ.
7. ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ, ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.

...5.

Scanned with OKEN Scanner

8. ಮಾನ್ಯ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ.
9. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ.
10. ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ.
11. ಸರ್ಕಾರದ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ ರವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
12. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.

Scanned with OKEN Scanner